ವಿಷಯ : ಬೀದರ್-ಶ್ರೀರಂಗಪಟ್ಟಣ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 392 (237)

ಶ್ರೀ ಪಿ. ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಶ್ರೀರಂಗಪಟ್ಟಣ ರಸ್ತೆಯನ್ನುರಾಷ್ಟ್ರೀಯ ಹೆದ್ದಾರಿ ಎಂದು ನಿರ್ಮಿಸಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ?

ಆ) ಹಾಗಿದ್ದಲ್ಲಿ, ಭಾರತ ಸರ್ಕಾರವು ಒಪ್ಪಿಗೆ ನೀಡಿದೆಯೇ?

ಇ) ಬೀದರ್‌ನಲ್ಲಿರುವ ರಸ್ತೆಗಳು ಬಹಳ ಕೆಟ್ಟ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಮೇಲಿನ ರಾಷ್ಟ್ರೀಯ ಹೆದ್ದಾರಿಗೆ ಕೇಂದ್ರ ಸರ್ಕಾರದ ಒಪ್ಪಿಗೆ ಪಡೆಯಲು ರಾಜ್ಯ ಸರ್ಕಾರವು ಕ್ರಮ ಕೈಗೊಳ್ಳುವುದೇ?

ಉ) ಮೇಲಿನ ರಾಷ್ಟ್ರೀಯ ಹೆದ್ದಾರಿ ಮೇಲೆ 1993-9 ಸಾಲಿನಲ್ಲಿ ಖರ್ಚು ಮಾಡಿದ ಹಾಗೂ 1994-95ನೇ ಸಾಲಿನಲ್ಲಿ ಖರ್ಚು ಮಾಡಲಿರುವ ಒ ಎಷ್ಟು?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಹೌದು, ರಾಜ್ಯ ಸರ್ಕಾರವು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ಪ್ರಸ್ತಾಪಿಸಿರುವ ಹದಿಮೂರು (13) ರಸ್ತೆಗಳಲ್ಲಿ ಈ ರಸ್ತೆಯೂ ಸಹ ಸೇರಿದೆ.

ಆ) ಇನ್ನೂ ಇಲ್ಲ.

ಇ) ಇಲ್ಲಾ.

ಬೀದರ್ ಜಿಲ್ಲೆಯ ಎಲ್ಲಾ ರಸ್ತೆಗಳನ್ನು ಸುಗಮ ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಸುಸ್ಥಿತಿಯಲ್ಲಿ ಇಡಲಾಗಿದೆ. ಇಡಲಾಗುತ್ತಿದೆ.

ಈ) ಹೌದು.

ಉ) ಪ್ರಸ್ತುತ, ಈ ರಸ್ತೆಯು ರಾಷ್ಟ್ರೀಯ ಹೆದ್ದಾರಿಯಾಗಿ ಇನ್ನೂ ಪರಿವರ್ತನೆಯಾಗದಿರುವುದರಿಂದ ಇದಕ್ಕೆ ರಾಷ್ಟ್ರೀಯ ಹೆದ್ದಾರಿಯೆಂದು ಖರ್ಚು ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ : ಬೆಳಗಾಂ ತಾಲ್ಲೂಕಿನಲ್ಲಿ ನೆರೆ ಹಾವಳಿಯಿಂದ ರಸ್ತೆಯು ಕೊಚ್ಚಿಹೋಗಿರುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 393 (523)

ಶ್ರೀ ಬಿ.ಐ. ಪಾಟೀಲ್ (ಉಚ್ಚಾಂಗವ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚಿನ ನೆರೆಹಾವಳಿಗೆ ಬೆಳಗಾಂವ ತಾಲ್ಲೂಕಿನ ಯಳ್ಳೂರ ರಸ್ತೆಯು ಕೊಚ್ಚಿ ಹೋದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದೇ?

ಆ) ಹಾಗಿದ್ದಲ್ಲಿ, ಈ ರಸ್ತೆಯನ್ನು ಹೊಸದಾಗಿ ನಿರ್ಮಿಸುವುದಕ್ಕೆ ಸರ್ಕಾರದಿಂದ ಕೈಗೊಂಡ ಕ್ರಮಗಳೇನು?

ಇ) ಸರ್ಕಾರವು ಈ ರಸ್ತೆ ಪುನರ್ ನಿರ್ಮಾಣಕ್ಕೆ ತ್ವರಿತ ಕ್ರಮಗಳೇನಾದರೂ ತೆಗೆದುಕೊಂಡು ಅನುದಾನ ಬಿಡುಗಡೆ ಮಾಡುವುದೇ?

ಶ್ರೀ ಕೆ. ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಇತ್ತೀಚಿನ ಬಾರಿ ಮಳೆಯಿಂದಾಗಿ ಬೆಳಗಾಂವ ತಾಲ್ಲೂಕಿನ ವಡಗಾಂವ ಯಳ್ಳೂರ ರಾಜ-ಹಂತಗದ ರಸ್ತೆಯ ಕಿ.ಮಿ. 3.00 ಹಾಗೂ 4.00ರಲ್ಲಿ ಕೆಲವೊಂದು ಬಾಗಗಳಿಗೆ ಬಹಳ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಹಾನಿಗೀಡಾದ ರಸ್ತೆಯ ಭಾಗಗಳನ್ನು ತಾತ್ಕಾಲಿಕವಾಗಿ ದುರಸ್ತಿ ಮಾಡಿ ವಾಹನಸಂಚಾರಕ್ಕೆ ಸುಗಮ ಮಾಡಿ ಕೊಡಲಾಗಿದೆ. ಈ ರಸ್ತೆಯಲ್ಲಿ ಶಾಶ್ವತ ಸುಧಾರಣೆ ಕೆಲಸಗಳನ್ನು ಅನುದಾನ ಲಭ್ಯತೆ ಅನುಸರಿಸಿ ತೆಗೆದುಕೊಳ್ಳಲು ಪ್ರಸ್ತಾಪಿಸಿದೆ.

ಇ) ಶಾಶ್ವತ ದುರಸ್ತಿಗಾಗಿ ಅತಿವೃಷ್ಟಿ ಪರಿಹಾರ ನಿಧಿಯಿಂದ ಅನುದಾನಕ್ಕಾಗಿ ಬೇಡಿಕೆ ಸಲ್ಲಿಸಿದ್ದು, ಪ್ರಸಕ್ತ ಈ ರಸ್ತೆಯ ಅಭಿವೃದ್ಧಿಗಾಗಿ 8 ಲಕ್ಷ ರೂ.ಗಳ ಅಂದಾಜಿನಲ್ಲಿ 1994-95ರ ಸಾಲಿನಲ್ಲಿ 4.00 ಲಕ್ಷ ರೂ.ಗಳ ಅನುದಾನ ನಿಗಧಿಪಡಿಸಲಾಗಿದ್ದು, ಅಭಿವೃದ್ಧಿ ಕಾಮಗಾರಿಯನ್ನು ತೆಗೆದುಕೊಳ್ಳಲಾಗುವುದು.

ವಿಷಯ : ವಾಣಿಜ್ಯ ಸಂಸ್ಥೆಗಳಲ್ಲಿನ ಕರ್ನಾಟಕ ವಿದ್ಯುಚ್ಛಕ್ತಿ ಮಂಡಲಿ ವಿದ್ಯುತ್ ಮಾಪಕಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 394 (740)

ಶ್ರೀ ಕೆ.ಸಿ. ಮೊಡಗೇಕರ್ ದೇಸಾಯಿ (ಬಾಗೇವಾಡಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಣಿಜ್ಯ ಸಂಸ್ಥೆಗಳಲ್ಲಿನ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ವಿದ್ಯುತ್ ಮಾಪಕಗಳನ್ನು ಮಂಡಳಿಯ ಅಧಿಕಾರಿಗಳ ಸದುಪಯೋಗದೊಂದಿಗೆ ಒಗೆದು ನೋಡುತ್ತಿರುವುದು ನಿಜವೆ?

ಆ) ಹಾಗಿದ್ದಲ್ಲಿ, ಬೆಳಗಾಂ ಜಿಲ್ಲೆಯಲ್ಲಿ ದಾಖಲು ಮಾಡಲಾದ ಈ ತರಹದ ಪ್ರಕರಣಗಳೆಷ್ಟು ಮತ್ತು ಕ್ರಮ ತೆಗೆದುಕೊಳ್ಳಲಾದ ಸಂಖ್ಯೆ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ : ಬೆಳಗಾಂ ತಾಲ್ಲೂಕಿನ ಬಳ್ಳಾರಿ ನಾಲಾದ ಮೇಲೆ ನಿಲಜಿ ಗ್ರಾಮದ ಹತ್ತಿರ ಏತ ನೀರಾವರಿ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 395 (739)

ಶ್ರೀ ಕೆ.ಬಿ. ಮೋಡಗೇಕರ್ ದೇಸಾಯಿ (ಬಾಗೇವಾಡಿ) ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ. ಬೆಳಗಾಂವ ತಾಲ್ಲೂಕಿನ ಬಳ್ಳಾರಿ ನಾಲಾದ ಮೇಲೆ ನಿಲಜಿ ಗ್ರಾಮದ ಹತ್ತಿರ ಯಾತ ನೀರಾವರಿ ಯೋಜನೆಯ ಸರ್ವೆ ಮತ್ತು ಅಂದಾಜನ್ನು ತಯಾರಿಸಲಾಗಿದೆಯೇ;

ಆ. ಹಾಗಿದ್ದಲ್ಲಿ ಆಯವ್ಯಯದಲ್ಲಿ ಒದಗಿಸಿದ ಅನುದಾನವೆಷ್ಟು;

ಇ. ಈ ಬಗ್ಗೆ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು;

ಈ. ಯಾವ ದಿನಾಂಕದಂದು ಕೆಲಸವನ್ನು ಪ್ರಾರಂಭಿಸಲಾಗುವುದು ಹಾಗೂ ಮುಗಿಸಲಾಗುವುದು?

ಶ್ರೀ ಎಂ.ಪಿ. ಕೇಶವಮೂರ್ತಿ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ. ಇಲ್ಲ.

ಆ. ಈ ಕಾಮಗಾರಿಯು 94-95ನೇ ಸಾಲಿನ ಆಯವ್ಯಯದಲ್ಲಿ ಸೇರಿರುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ಈ. ಉದ್ಭವಿಸುವುದಿಲ್ಲ.

ವಿಷಯ : ಮಾರ್ಕಂಡಯ ನದಿಗೆ ಸೇತುವೆ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 396(733)

ಶ್ರೀ ಕೆ.ಸಿ. ಮೊಡಗೇಕರ್ ದೇಸಾಯಿ(ಬಾಗೇವಾಡಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾವಿ ತಾಲ್ಲೂಕಿನ ಕಂಗ್ರಾಳಿ ಕಡೋಳಿ ರಸ್ತೆಯ ಮಾರ್ಕಂಡೇಯ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಮಾಡಲು ಅತ್ಯಾವಶ್ಯಕವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?